**Akashvani : Bangalore**
**Regional Bulletin In Kannada**
**20.06.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**20.06.2025 / 18.40  hrs**
**<><*<><>*><>**

**ಮುಖ್ಯಾಂಶಗಳು**

**೧. ದೇಶದಲ್ಲಿ ವೈದ್ಯಕೀಯ ಸೀಟುಗಳ ಸಂಖ್ಯೆ ೧ ಲಕ್ಷದ ೧೮ ಸಾವಿರಕ್ಕೆ ಹೆಚ್ಚಳ - ಕೇಂದ್ರ ಗೃಹ ಸಚಿವ ಅಮಿತ್ ಶಾ**

**೨. ಕೇಂದ್ರದ ಮಾದರಿಯಲ್ಲಿ ವಸತಿ ಯೋಜನೆಗಳಲ್ಲಿ ಶೇಕಡ ೧೫ರಷ್ಟು ಮೀಸಲಾತಿ- ಸಚಿವ ಜಮೀರ್ ಅಹಮದ್ ಸಮರ್ಥನೆ**

**೩. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ**

**೪. ಗಾಲಿ ಜನಾರ್ಧನ ರೆಡ್ಡಿ ಶಾಸಕ ಸ್ಥಾನ ಮುಂದುವರೆಸಿ ಸ್ಪೀಕರ್ ಕಚೇರಿ ಆದೇಶ**

**೫. ನಾಳೆ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ - ರಾಜ್ಯದ ವಿವಿಧೆಡೆ ಯೋಗ ಜಾಗೃತಿ ನಡಿಗೆ**

**<><*<><>*><>**

ಬಡತನದೊಂದಿಗೆ ಆರೋಗ್ಯದ ವೆಚ್ಚವೂ ದೇಶದ ಜನರನ್ನು ಕಾಡುತ್ತಿದ್ದು ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಅಯುಷ್ಮಾನ್ ಭಾರತ್ ಜನೌಷಧಿ ಕೇಂದ್ರಗಳ ಮೂಲಕ ಜನರ ಕಷ್ಟ ಪರಿಹಾರಕ್ಕೆ ಸ್ಪಂದಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆದಿಚುಂಚನಗಿರಿ ವಿಶ್ವವಿದ್ಯಾಲಯದ ಮೆಡಿಕಲ್ ಕಾಲೇಜು ಹಾಗೂ ಅಸ್ಪತ್ರೆ ಕಟ್ಟಡವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ದೇಶದಲ್ಲಿ ೩೮೭ರಷ್ಟಿದ್ದ ವೈದ್ಯಕೀಯಕಾಲೇಜುಗಳ ಸಂಖ್ಯೆ ೭೮೦ಕ್ಕೆ ಏರಿದ್ದು, ೫೧ಸಾವಿರ ಇದ್ದ ವೈದ್ಯಕೀಯ ಸೀಟುಗಳು ೧ ಲಕ್ಷ ೧೮ ಸಾವಿರಕ್ಕೆ ಹೆಚ್ಚಿಸಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

**ಧ್ವನಿ- ಅಮಿತ್ ಶಾ**

ಇದೇ ವೇಳೆ ಮಾತನಾಡಿದ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಪ್ರತಿ ಜಿಲ್ಲೆಯಲ್ಲಿ ಒಂದು ವೈದ್ಯಕೀಯ ಕಾಲೇಜು, ಕ್ಯಾನ್ಸರ್ ಚಿಕಿತ್ಸಾ ಕೇಂದ್ರ, ಹಾಗೂ ಅಪಘಾತ ಚಿಕಿತ್ಸಾ ಕೇಂದ್ರ ಆರಂಭಿಸುವುದಾಗಿ ಘೋಷಿಸಿದ್ದಾರೆ.

**ಧ್ವನಿ- ಶರಣ ಪ್ರಕಾಶ್ ಪಾಟೀಲ್**

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಸೋಮಣ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

**<><*<><>*><>**

ವಸತಿ ಯೋಜನೆಗಳಲ್ಲಿ ಅಲ್ಪಸಂಖ್ಯಾತ ಸಮುದಾಯಕ್ಕೆ ಶೇಕಡ ೧೫ ರಷ್ಟು ಮೀಸಲು ನಿರ್ಧಾರ ಕೇಂದ್ರದ ಮಾದರಿ ಎಂದು ವಸತಿ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಸಾಚಾರ್ ಸಮಿತಿ ವರದಿ ಪ್ರಕಾರ ಕೇಂದ್ರ ಸರ್ಕಾರದಲ್ಲಿ ಈಗಾಗಲೇ ವಸತಿ ಯೋಜನೆಗಳಲ್ಲಿ ಶೇಕಡ ೧೫ ರಷ್ಟು ಮೀಸಲಾತಿ ಅಲ್ಪಸಂಖ್ಯಾತ ಸಮುದಾಯಕ್ಕೆ ಇದೆ. ಅದೇ ರೀತಿ ರಾಜ್ಯದಲ್ಲೂ ನೀಡಬೇಕು ಎಂಬ ಬೇಡಿಕೆ ಇತ್ತು. ಈ ಹಿನ್ನೆಲೆಯಲ್ಲಿ ಕೇಂದ್ರದ ಮಾದರಿಯನ್ನೇ ಅನುಸರಿಸಲಾಗಿದೆ ಎಂದು ತಿಳಿಸಿದ್ದಾರೆ. ಪ್ರತಿಪಕ್ಷಗಳು ಅನಗತ್ಯ ಟೀಕೆ ಮಾಡುತ್ತಿರುವುದು ಶೋಭೆ ತರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಅಲ್ಪಸಂಖ್ಯಾರಿಗೆ ವಸತಿ ಕೋಟಾವನ್ನು ಶೇಕಡ ೧೦ ರಿಂದ ೧೫ಕ್ಕೆ ಹೆಚ್ಚಿಸುವ ನಿರ್ಧಾರದ ಬಗ್ಗೆ ಸರ್ಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಾವು ಅಲ್ಪಸಂಖ್ಯಾತರ ವಿರೋಧಿ ಅಲ್ಲ, ಆದರೆ ಅಲ್ಪಸಂಖ್ಯಾತರಿಗೆ ಹೆಚ್ಚಿನ ಸವಲತ್ತು ನೀಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಅಭಿವೃದ್ಧಿ ಹಾಗೂ ಸಮಾಜದ ಎಲ್ಲಾ ವರ್ಗಗಳ ಜನರಿಗೆ ನ್ಯಾಯ ಒದಗಿಸುವಂತೆ ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಪ್ರತಿ ಇಲಾಖೆಯಲ್ಲಿ ಕಮಿಷನ್ ಹಾವಳಿ ಹಾಗೂ ಭ್ರಷ್ಟಾಚಾರ ಮಿತಿಮೀರಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸರ್ಕಾರದಲ್ಲಿ ಏನು ನಡೆಯುತ್ತಿದೆ ಎಂಬುದಕ್ಕೆ ಮುಖ್ಯಮಂತ್ರಿ ಸಲಹೆಗಾರ ಬಿ.ಆರ್. ಪಾಟೀಲ್ ಹೇಳಿರುವ ಮಾತುಗಳೇ ಸಾಕ್ಷಿ ಎಂದು ತಿಳಿಸಿದ್ದಾರೆ. ಕೃಷ್ಣಭೈರೇಗೌಡ ಅವರು ಕಂದಾಯ ಇಲಾಖೆಯಲ್ಲಿ ಯಾವ ರೀತಿ ಕೆಲಸ ನಡೆಯುತ್ತಿದೆ ಎಂದು ತಿಳಿಸಿದ್ದು, ಇದಕ್ಕಿಂತ ಉದಾಹರಣೆ ಬೇಕೆ ಎಂದು ಪ್ರಶ್ನಿಸಿದ್ದಾರೆ.

<><*<><>*><>

ಮುಂದಿನ ದಿನಗಳಲ್ಲಿ ಕುಮಾರಸ್ವಾಮಿ ಸರ್ಕಾರ ಅಧಿಕಾರಕ್ಕೆ ಬರುವುದಿಲ್ಲ ಗೆಲ್ಲುವುದೂ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಗ್ರಾಮೀಣ ಭಾಗದಲ್ಲಿ ಅಲ್ಪಸಂಖ್ಯಾತ ಫಲಾನುಭವಿಗಳು ಕಡಿಮೆ ಇರುವ ಕಾರಣಕ್ಕೆ ವಸತಿ ಸಚಿವರು ಮನೆ ಹಂಚಿಕೆ ಮೀಸಲಾತಿಯನ್ನು ನಗರ ಪ್ರದೇಶಕ್ಕೆ ವರ್ಗಾವಣೆ ಮಾಡಿದ್ದಾರೆ. ನಾವು ಯಾರ ಸೌಲಭ್ಯಗಳನ್ನು ಕಿತ್ತು ಅಲ್ಪಸಂಖ್ಯಾತರಿಗೆ ನೀಡುತ್ತಿಲ್ಲ" ಎಂದು ಸ್ಪಷ್ಟನೆ ನೀಡಿದ್ದಾರೆ. ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಹಣ ಕೊಟ್ಟರೇ ಮಾತ್ರ ಮನೆ ಹಂಚಿಕೆ ಎನ್ನುವ ಶಾಸಕ ಬಿ.ಆರ್. ಪಾಟೀಲ್ ಆರೋಪದ ಬಗ್ಗೆ ಪ್ರತಿಕ್ರಿಯಿಸಿ ಈ ಬಗ್ಗೆ ಮಾಹಿತಿ ಇಲ್ಲ" ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರು ವೇಗವಾಗಿ ಬೆಳೆಯುತ್ತಿರುವ ನಗರಗಳಲ್ಲಿ ಒಂದಾಗಿದ್ದು ಪರಿಸರ ಸವಾಲುಗಳೂ ಹೆಚ್ಚಾಗಿವೆ. ಈ ಹಿನ್ನೆಲೆಯಲ್ಲಿ ನಗರವನ್ನು ಸುಸ್ಥಿರ ಮತ್ತು ಹಸಿರು ನಗರವನ್ನಾಗಿ ರೂಪಿಸಲು ಎಲ್ಲರೂ ಕೈಜೋಡಿಸೋಣ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ "ಹವಾಮಾನ ಸ್ಥಿತಿಸ್ಥಾಪಕ ಪ್ರಪಂಚಕ್ಕಾಗಿ ಕಾರ್ಯನಿರ್ವಹಿಸಲು ನಾವೀನ್ಯತೆ" ಎಂಬ ಘೋಷ ವಾಕ್ಯದೊಂದಿಗೆ ನಡೆದ ೭ನೇ ಪ್ರಾದೇಶಿಕ ಸಮಾವೇಶದಲ್ಲಿ ಮಾತನಾಡಿದ ಅವರು ಜಲಸಂಕಷ್ಟ, ತ್ಯಾಜ್ಯ ನಿರ್ವಹಣೆ ಮತ್ತು ಸಂಚಾರ ದಟ್ಟಣೆ ನಗರ ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳಾಗಿವೆ. ಈ ಸಮಾವೇಶವು ಈ ಸಮಸ್ಯೆಗಳಿಗೆ ಸುಸ್ಥಿರ ಪರಿಹಾರಗಳನ್ನು ಚರ್ಚಿಸಲು ಮತ್ತು ಕಾರ್ಯರೂಪಕ್ಕೆ ತರಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಹಸಿರು ತಂತ್ರಜ್ಞಾನಗಳು, ನವೀಕರಿಸಬಹುದಾದ ಇಂಧನ ಮೂಲಗಳು ಮತ್ತು ಪರಿಸರ ಸ್ನೇಹಿ ನಿರ್ಮಾಣ ವಿಧಾನಗಳನ್ನು ಪ್ರೋತ್ಸಾಹಿಸಲು ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಸಿಬಿಐ ವಿಶೇಷ ನ್ಯಾಯಾಲಯದಿಂದ ಶಿಕ್ಷೆಗೆ ಒಳಗಾದ ಹಿನ್ನೆಲೆಯಲ್ಲಿ ಶಾಸಕ ಸ್ಥಾನದಿಂದ ಅನರ್ಹಗೊಂಡಿದ್ದ ಬಿಜೆಪಿ ಶಾಸಕ ಜನಾರ್ಧನರೆಡ್ಡಿ ಅವರ ಅನರ್ಹತೆ ಆದೇಶವನ್ನು ಕರ್ನಾಟಕ ವಿಧಾನಸಭೆ ಹಿಂದಕ್ಕೆ ಪಡೆದಿದೆ. ಸಿಬಿಐ ವಿಶೇಷ ನ್ಯಾಯಾಲಯದ ತೀರ್ಪಿಗೆ ತೆಲಂಗಾಣ ಹೈಕೋರ್ಟ್ ತಡೆ ನೀಡಿದೆ.  ಈ ಹಿನ್ನೆಲೆಯಲ್ಲಿ ಗಾಲಿ ಜನಾರ್ಧನ ರೆಡ್ಡಿ ಅವರನ್ನು ಶಾಸಕರನ್ನಾಗಿ ಮುಂದುವರೆಸಿ ಸ್ಪೀಕರ್ ಕಚೇರಿ ಆದೇಶ ಹೊರಡಿಸಿದೆ.

<><*<><>*><>

೧೧ ನೇ ಅಂತರರಾಷ್ಟ್ರೀಯ ಯೋಗ ದಿನವನ್ನು ನಾಳೆ ವಿಶ್ವಾದ್ಯಂತ ಆಚರಿಸಲಾಗುತ್ತಿದೆ. ೧೦೦ ಪ್ರವಾಸಿ ಆಧಾರಿತ ಐತಿಹಾಸಿಕ ತಾಣಗಳು ಮತ್ತು ದೇಶಾದ್ಯಂತ ೫೦ ಕ್ಕೂ ಹೆಚ್ಚು ಸಾಂಸ್ಕೃತಿಕ ತಾಣಗಳಲ್ಲಿ ಯೋಗ ಅಧಿವೇಶನಗಳನ್ನು ಆಯೋಜಿಸಲಾಗಿದೆ.  ಚಿಕ್ಕಮಗಳೂರು ಜಿಲ್ಲಾಡಳಿತದ ವತಿಯಿಂದ ನಗರದ ಒಕ್ಕಲಿಗರ ಸಮುದಾಯ ಭವನದಲ್ಲಿ ನಾಳೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಬಗ್ಗೆ ಆಕಾಶವಾಣಿಗೆ ಪತಂಜಲಿ ಯೋಗ ಶಿಕ್ಷಣ ಸಮಿತಿಯ  ಬಿ.ಎನ್ ಅವಿನಾಶ್ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ- ಅವಿನಾಶ್**

೧೧ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಪತಂಜಲಿ ಯೋಗ ಸಮಿತಿ, ವಿಜಯನಗರ ಜಿಲ್ಲಾಡಳಿತ ಹಾಗೂ ಆಯುಷ್ ಇಲಾಖೆ ಸೇರಿದಂತೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ  ಇಂದು ಹೊಸಪೇಟೆ ನಗರದಲ್ಲಿ ಯೋಗ ದಿವಸದ ಜಾಗೃತಿ  ಜಾಥಾ ಹಮ್ಮಿಕೊಂಡಿತ್ತು.

<><*<><>*><>

ಇದೇ ೨೨ರ ಭಾನುವಾರದಂದು ನಮ್ಮ ಮೆಟ್ರೋದ ನೇರಳೆ ಮಾರ್ಗದಲ್ಲಿ ಬಿಎಂಆರ್‌ಸಿಎಲ್ ನಿರ್ವಹಣಾ ಕಾಮಗಾರಿ ಕೈಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ನಮ್ಮ ಮೆಟ್ರೋ ಸಂಚಾರ ತಾತ್ಕಾಲಿಕವಾಗಿ ಸ್ಥಗಿತಗೊಳ್ಳಲಿದೆ. ಹಸಿರು ಮಾರ್ಗದ ಸಂಚಾರಕ್ಕೆ ಯಾವುದೇ ವ್ಯತ್ಯಯವಿಲ್ಲ. ಕೇವಲ ನೇರಳೆ ಮಾರ್ಗದಲ್ಲಿ ಮಾತ್ರ ಸಂಚಾರ ವ್ಯತ್ಯಯವಾಗಲಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.  ಟ್ರಿನಿಟಿ ಸರ್ಕಲ್ ಹಾಗೂ ಹಲಸೂರು ನಡುವೆ ನಿಗದಿತ ನಿರ್ವಾಹಣ ಕಾರ್ಯ ನಡೆಯಲಿದೆ. ಬೈಯಪ್ಪನಹಳ್ಳಿಯಿಂದ ಕಾಡುಗೋಡಿವರೆಗೂ ಹಾಗೂ ಚಲಘಟ್ಟದಿಂದ ಎಂಜಿ ರಸ್ತೆವರೆಗೂ ಮೆಟ್ರೋ ಸಂಚಾರ ಇರಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫  ಗಂಟೆಗೆ<>*><>**